**ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಮತ್ತು ಮಾರಿಷಸ್‌ನ ಪ್ರಧಾನ ಮಂತ್ರಿ ಶ್ರೀ ನವೀನ್‌ಚಂದ್ರ ರಾಮಗೂಲಂ ಅವರು ಮಾರಿಷಸ್‌ನಲ್ಲಿ ಅಟಲ್ ಬಿಹಾರಿ ವಾಜಪೇಯಿ ಸಾರ್ವಜನಿಕ ಸೇವೆ ಮತ್ತು ನಾವೀನ್ಯತೆ ಸಂಸ್ಥೆಯನ್ನು ಜಂಟಿಯಾಗಿ ಉದ್ಘಾಟಿಸಿದರು (ಮಾರ್ಚ್ 12, 2025)**

ಮಾರ್ಚ್ 12, 2025

ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಮತ್ತು ಮಾರಿಷಸ್‌ನ ಪ್ರಧಾನ ಮಂತ್ರಿ ಗೌರವಾನ್ವಿತ ಶ್ರೀ ನವೀನ್‌ಚಂದ್ರ ರಾಮಗೂಲಂ ಅವರು ಇಂದು ಮಾರಿಷಸ್‌ನ ರೆಡ್ಯೂಟ್‌ನಲ್ಲಿ ಅಟಲ್ ಬಿಹಾರಿ ವಾಜಪೇಯಿ ಸಾರ್ವಜನಿಕ ಸೇವೆ ಮತ್ತು ನಾವೀನ್ಯತೆ ಸಂಸ್ಥೆಯನ್ನು ಜಂಟಿಯಾಗಿ ಉದ್ಘಾಟಿಸಿದರು. ಭಾರತ-ಮಾರಿಷಸ್ ಅಭಿವೃದ್ಧಿ ಪಾಲುದಾರಿಕೆಯ ಅಡಿಯಲ್ಲಿ ಜಾರಿಗೊಳಿಸಲಾದ ಈ ಮಹತ್ವದ ಯೋಜನೆಯು, ಮಾರಿಷಸ್‌ನ ಅಭಿವೃದ್ಧಿ ಕಾರ್ಯಗಳಿಗೆ ಸಹಕಾರ ನೀಡುವಲ್ಲಿ ಭಾರತದ ಬದ್ಧತೆಯನ್ನು ಒತ್ತಿ ಹೇಳುತ್ತದೆ.

2. 2017 ರ ತಿಳಿವಳಿಕೆ ಒಪ್ಪಂದದ ಅಡಿಯಲ್ಲಿ US$ 4.74 ಮಿಲಿಯನ್ ಅನುದಾನದ ಮೂಲಕ ಹಣಕಾಸು ಒದಗಿಸಲಾದ ಈ ಅತ್ಯಾಧುನಿಕ ಸಂಸ್ಥೆಯು ಸಚಿವಾಲಯಗಳು, ಸಾರ್ವಜನಿಕ ಕಚೇರಿಗಳು, ಅರೆ-ಸರ್ಕಾರಿ ಸಂಸ್ಥೆಗಳು ಮತ್ತು ಸರ್ಕಾರಿ ಉದ್ಯಮಗಳಲ್ಲಿ ಮಾರಿಷಸ್‌ನ ನಾಗರಿಕ ಸೇವಕರ ತರಬೇತಿ ಅಗತ್ಯಗಳನ್ನು ಪೂರೈಸುತ್ತದೆ. ತರಬೇತಿಯ ಹೊರತಾಗಿ ಸಂಸ್ಥೆಯು, ಸಾರ್ವಜನಿಕ ಆಡಳಿತದಲ್ಲಿ ಶ್ರೇಷ್ಠತೆಯ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ. ಸಂಶೋಧನೆ, ಆಡಳಿತ ಅಧ್ಯಯನಗಳು ಮತ್ತು ಭಾರತದೊಂದಿಗೆ ಸಾಂಸ್ಥಿಕ ಸಂಬಂಧಗಳನ್ನು ಉತ್ತೇಜಿಸುತ್ತದೆ.

3. ಈ ಸಂದರ್ಭದಲ್ಲಿ, ಪ್ರಧಾನಮಂತ್ರಿಯವರು ಭಾರತದಲ್ಲಿ ತರಬೇತಿ ಮತ್ತು ಶಿಕ್ಷಣ ಪಡೆದ ITEC ಮತ್ತು GoI ವಿದ್ಯಾರ್ಥಿವೇತನದ ಹಳೆಯ ವಿದ್ಯಾರ್ಥಿಗಳೊಂದಿಗೆ ಮಾತುಕತೆ ಸಹ ನಡೆಸಿದರು. ಈ ಸಾಮರ್ಥ್ಯ ವರ್ಧನೆ ವಿನಿಮಯಗಳು ಎರಡು ರಾಷ್ಟ್ರಗಳ ನಡುವಿನ ಜನ ಜನರ ನಡುವಿನ ಸಂಬಂಧಗಳನ್ನು ಇನ್ನಷ್ಟು ಗಾಢಗೊಳಿಸಿದೆ.

4. ಜಾಗತಿಕ ದಕ್ಷಿಣ ರಾಷ್ಟ್ರಗಳಿಗೆ ಭಾರತದ ಬದ್ಧತೆಗೆ ಅನುಗುಣವಾಗಿ, ಸಂಸ್ಥೆಯು ಹಿಂದೂ ಮಹಾಸಾಗರ ಪ್ರದೇಶದಲ್ಲಿ ವಿಶ್ವಾಸಾರ್ಹ ಪಾಲುದಾರ ದೇಶವಾಗಿ ಭಾರತದ ಪಾತ್ರವನ್ನು ಮತ್ತು ಭಾರತ-ಮಾರಿಷಸ್ ಸಮಗ್ರ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಅದರ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

ಪೋರ್ಟ್ ಲೂಯಿಸ್

ಮಾರ್ಚ್ 12, 2025